# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ಹಿರಿಯೂರು

ಸಿ.ಸಿ ನಂಃ **44/2023**

ಪಿರ್ಯಾದಿಃ ಹಿರಿಯೂರು ಗ್ರಾಮಾಂತರ ಪೋಲಿಸ್ ಠಾಣೆ

ವಿರುದ್ಧ

ಆರೋಪಿಃ ದೇವರಾಜ
ಬಿನ್ ಲೇಟ್ ಹೊನ್ನಪ್ಪ, 39 ವರ್ಷ
ವಾಸಃ ಕೆ.ಆರ್ ಪುರ, (ಪುಟ್ಟಯ್ಯನಕಟ್ಟೆ ಗ್ರಾಮ),
ಹಿರಿಯೂರು ತಾಲ್ಲೂಕು.

## ದೋಷಾರೋಪಣೆ

ನಾನು ಶ್ರೀಮತಿ. ಸುಜಾತ ಸುವರ್ಣ.ಬಿ, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಹಿರಿಯೂರು, ಈ ಮೂಲಕ ನಿಮ್ಮನ್ನು ದೋಷಾರೋಪಣೆಗೆ ಗುರಿಪಡಿಸುವುದೇನೆಂದರೆ

ದಿನಾಂಕ **08.10.2022** ರಂದು ಬೆಳಿಗ್ಗೆ **8.30** ರ ಸಮಯದಲ್ಲಿ ಹಿರಿಯೂರು ತಾಲ್ಲೂಕು ಪುಟ್ಟಯ್ಯನಕಟ್ಟೆ ಗ್ರಾಮದ ಜಗನ್ನಾಥ ರವರ ಅಂಗಡಿಯ ಮುಂದಿನ ಟಾರ್ ರಸ್ತೆಯಲ್ಲಿ ಆರೋಪಿತನು ರಸ್ತೆಯಲ್ಲಿ ನಡೆದುಕೊಂಡು ಬರುತ್ತಿದ್ದ ಚಾಸಾ.3 ರವರಿಗೆ ಏನೋ ಸೂಳೆ ಮಗನೇ ಬೋಳಿ ಮಗನೇ ನಾನು ಕೆಲಸಕ್ಕೆ ಬಾರದೇ ಇದ್ದರೂ ನೀನು ಹೋಗಿದ್ದೀಯ ಎಂದು ಹೇಳಿ ಅವಾಚ್ಯ ಶಬ್ದಗಳಿಂದ ಬೈದಾಡಿದ್ದು ಮತ್ತು ಈ ಬಗ್ಗೆ ಚಾಸಾ.1 ಮತ್ತು **2** ರವರು ಕೇಳಿದ್ದು ಆರೋಪಿತನು ಚಾಸಾ.1 ಮತ್ತು **2** ರವರಿಗೆ ಸೂಳೆ ಮುಂಡೆರಾ, ಬೋಳಿಮುಂಡೇರಾ ಎಂದು ಅವಾಚ್ಯ ಶಬ್ದಗಳಿಂದು ಬೈದಾಡಿ ಶಾಂತಿ ಭಂಗವುಂಟುಮಾಡಿದ್ದು ಆ ಮೂಲಕ ನೀವು ಭಾ ದಂ ಸಂ ಕಲಂ **504** ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ.

2. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ.3 ರವರಿಗೆ ಕೈ ಕಾಲುಗಳಿಂದು ಹೊಡೆದು ಕೊರಳುಪಟ್ಟಿ ಹಿಡಿದುಕೊಂಡು ಎಳೆದುಕೊಂಡು ಹೋಗಿದ್ದು ಮತ್ತು ಚಾಸಾ.1 ಮತ್ತು 2 ರವರಿಗೆ ನಾನು ಕೆಲಸಕ್ಕೆ ಹೋಗದೇ ಇದ್ದರೆ ನಿನ್ನ ತಮ್ಮನು ಕೆಲಸಕ್ಕೆ ಹೋಗಬಾರದು ಎಂದು ಹೇಳಿದ್ದರೂ ಸಹ ನನ್ನನ್ನು ಬಿಟ್ಟು ಕೂಲಿ ಕೆಲಸಕ್ಕೆ ಏಕೆ ಹೋಗಿರುತ್ತಾನೆ ಎಂದು ಹೇಳಿ ಚಾಸಾ.3 ರವರಿಗೆ ಪುನಃ ಕೈಕಾಲುಗಳಿಂದ ಹೊಡೆದು ನೆಲಕ್ಕೆ ತಳ್ಳಿದ್ದು ಬಿಡಿಸಲು ಹೋದ ಚಾಸಾ.1 ರವರಿಗೆ ಕೈ ಕಾಲುಗಳಿಂದ ಹೊಡೆದು ನೋವುಂಟುಪಡಿಸಿದ್ದು ಆ ಮೂಲಕ ಆ ಮೂಲಕ ನೀವು ಭಾ ದಂ ಸಂ ಕಲಂ 323 ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ.

3. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ.1 ರವರಿಗೆ ಕೈ ಕಾಲುಗಳಿಂದ ಹೊಡೆದು ಅವರ ತೊಟ್ಟಿದ್ದ ನೈಟಿಯನ್ನು ಹರಿದು ಹಾಕಿ ಆಕೆಯ ಚಾರಿತ್ರ್ಯ ವಧೆ ಮಾಡಿದ್ದು ಆ ಮೂಲಕ ನೀವು ಭಾ ದಂ ಸಂ ಕಲಂ 354(ಬಿ) ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ .

4. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ.2 ರವರಿಗೆ ಕಲ್ಲಿನಿಂದ ಹೊಡೆದು ನೋವುಂಟುಪಡಿಸಿದ್ದು ಆ ಮೂಲಕ ಆ ಮೂಲಕ ನೀವು ಭಾ ದಂ ಸಂ ಕಲಂ 324 ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ.

5. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಚಾಸಾ.1 ಮತ್ತು 2 ರವರಿಗೆ ನಿಮ್ಮನ್ನು ಇಷ್ಟಕ್ಕೆ ಬಿಡುವುದಿಲ್ಲವೆಂದು ಪ್ರಾಣ

ಬೆದರಿಕೆ ಹಾಕಿದ್ದು ಆ ಮೂಲಕ  ನೀವು ಭಾ ದಂ ಸಂ ಕಲಂ 504 ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ.

(ಈ ಮೇಲೆ ಹೇಳಿದ ಆರೋಪಗಳು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುತ್ತಿದ್ದು ಈ ಆರೋಪಗಳಿಗಾಗಿ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಒಳಪಡತಕ್ಕದೆಂದು ಈ ಮೂಲಕ ನಾನು ನಿರ್ದೇಶಿಸುತ್ತೇನೆ .)

ದಿನಾಂಕಃ **24.07.2024**
ಸ್ಥಳಃ ಹಿರಿಯೂರು

(ಸುಜಾತ ಸುವರ್ಣ. ಬಿ)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ., ಹಿರಿಯೂರು